**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 3553/2021**

| | | | |
|---|---|---|---|
| **ಹೆಸರು** | : | **ಚನ್ನಪ್ಪ** | **ಚಾ.ಸಾ. 2** |
| **ತಂದೆಯ ಹೆಸರು** | : | **ಚಂದ್ರಪ್ಪ** | **ಪ್ರಾ.ಸಾ. 4** |
| **ವಯಸ್ಸು** | : | **50 ವರ್ಷ** | **ದಿನಾಂಕಃ 09-09-2025** |
| **ಉದ್ಯೋಗ** | : | **ಚಾಲಕ** | |
| **ವಾಸಸ್ಥಳ** | : | **ಚಿಂಚೋಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಚಾಸಾ-1, 3 ಮತ್ತು 4 ರವರು ನನಗೆ ಗೊತ್ತಿಲ್ಲ. ಆರೋಪಿ ನನಗೆ ಗೊತ್ತಿಲ್ಲ.

ಈಗ ನೋಡುತ್ತಿರುವ ನಿಪಿ-3 ರಿಂದ 5 ರಲ್ಲಿರುವ ದಾಖಲೆಗಳಲ್ಲಿ ನನ್ನ ಸಹಿಗಳಿವೆ. ನನ್ನ ಸಹಿಗಳನ್ನು ನಿಪಿ-3(ಬಿ), ನಿಪಿ-4(ಬಿ) ಮತ್ತು ನಿಪಿ-5(ಬಿ) ಎಂದು ಗುರುತಿಸಲಾಯಿತು. ಈಗ 1 ವರ್ಷದ ಹಿಂದೆ ಬೆಳಗ್ಗೆ 10.30 ಗಂಟೆ ಸುಮಾರಿಗೆ ನಾನು ಚಿಂಚೋಳಿ ಬಸ್ ನಿಲ್ದಾಣದ ಹತ್ತಿರ ಇದ್ದಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿದ್ದೇನೆ. ಯಾವ ಕಾರಣಕ್ಕಾಗಿ ಸಹಿ ಪಡೆದುಕೊಂಡರು ಎಂದರೆ ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತು ಜಪ್ತು ಮಾಡಿಲ್ಲ ಮತ್ತು ಯಾವುದೇ ಸ್ಥಳಕ್ಕೆ ಕರೆದುಕೊಂಡು ಹೋಗಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಪಂಚನಾಮೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ-**

ದಿನಾಂಕಃ 09-05-2021 ರಂದು ಬೆಳಗ್ಗೆ 07-00 ಗಂಟೆ ಸುಮಾರಿಗೆ ಪೋಲಿಸರು ನನಗೆ ಮತ್ತು ಚಾಸಾ-3 ರವರಿಗೆ ಠಾಣೆಗೆ ಕರೆದು ಭಾತ್ಮಿ ಬಗ್ಗೆ ತಿಳಿಸಿದರು ಎಂದರೆ ಸರಿಯಲ್ಲ. ನಂತರ ನಾನು, ಚಾಸಾ-3 ರವರು ಪೋಲಿಸರ ಜೊತೆ ಬೆಳಗ್ಗೆ 7 ಗಂಟೆಗೆ ಭಾತ್ಮಿ ಸ್ಥಳಕ್ಕೆ ಹೊರಟು ಚಿಂಚೋಳಿ ಪಟ್ಟಣದ ಬಸವೇಶ್ವರ ಸರ್ಕಲ ಹತ್ತಿರ ತಲುಪಿರುತ್ತೇವೆ ಎಂದರೆ ಸರಿಯಲ್ಲ. ಆಗ ಆರೋಪಿ ತನ್ನ ದ್ವಿಚಕ್ರ ವಾಹನದಲ್ಲಿ ಮದ್ಯಪಾನವನ್ನು ಸಾಗಾಟ ಮಾಡುತಿದ್ದ ಎಂದರೆ ಸರಿಯಲ್ಲ. ಆಗ ಪೋಲಿಸರು ಅವನ ಮೇಲೆ ದಾಳಿ ಮಾಡಿ ಅವನ ಹತ್ತಿರ ಇದ್ದ ಮದ್ಯಪಾನ ಜಪ್ತಿ ಮಾಡಿ ಜಪ್ತಿ ಪಂಚನಾಮೆ ಬರೆದಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಗೊತ್ತಿದ್ದರೂ

ಆರೋಪಿಯ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ರಾಸಾಯನಿಕ ಪರೀಕ್ಷೆಗಾಗಿ ಸದರಿ ವಸ್ತುಗಳನ್ನು ಜಪ್ತಿ ಮಾಡಿ ಸೀಲ ಮಾಡಿರುತ್ತಾರೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ CGM ವಕೀಲರಿಂದಃ-** ಇಲ್ಲಾ.

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**